ಪಂಗಡದ ಜನರಿಗಾಗಿ ಪ್ರಾರಂಭಿಸಲಾಗಿದೆ.

ವಿಷಯ: ರಾಜ್ಯದಲ್ಲಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಮುಖ್ಯೋಪಾಧ್ಯಾಯರ ಹುದ್ದೆಗಳು.

2490 (4009)

ಶ್ರೀ ಎ.ರುಕ್ಮಯ್ಯ ಪೂಜಾರಿ (ವಿಟ್ಲ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಪ್ರಾಥಮಿಕ ಶಾಲೆಗಳಲ್ಲಿ ಮುಖ್ಯೋಪಾಧ್ಯಾಯರ ಹುದ್ದೆಗಳು ಖಾಲಿ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ. ಹಾಗಿದ್ದಲ್ಲಿ ರಾಜ್ಯದಲ್ಲಿ ಇಂತಹ ಎಷ್ಟು ಹುದ್ದೆಗಳು ಖಾಲಿ ಇವೆ?

ಇ. ಇದನ್ನು ಭರ್ತಿ ಮಾಡಲು ಸರ್ಕಾರ ಏನು ಕ್ರಮ ತೆಗೆದುಕೊಳ್ಳುವುದು?

ಶ್ರೀ ಹೆಚ್.ಜಿ.ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):

ಅ. ಬಂದಿದೆ.

ಆ. 1594.

ಇ. ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಜೇಷ್ಠತೆಯ ಅನುಗುಣವಾಗಿ ಖಾಲಿ ಇರುವ ಮುಖ್ಯ ಶಿಕ್ಷಕರ ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡಲು ಜಿಲ್ಲಾ ಉಪನಿರ್ದೇಶಕರ ಹಂತದಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.

ವಿಷಯ: ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಔಷಧಿ ಸರಬರಾಜು

2491 (3598)

ಶ್ರೀ ಎ.ರುಕ್ಮಯ ಪೂಜಾರಿ (ವಿಟ್ಲ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ವರ್ಷ ಒಂದಕ್ಕೆ ಎಷ್ಟು ಔಷಧಿ ಸರಬರಾಜು ಮಾಡಲಾಗುವುದು? (ಸರ್ಕಾರದಿಂದ ಹಾಗೂ ಜಿಲ್ಲಾ ಪಂಚಾಯತ್‌ನಿಂದ ಒದಗಿಸುವ ವಿವರ ನೀಡುವುದು)

ಆ) ಸಮಯಕ್ಕೆ ಸರಿಯಾಗಿ ಹಾಗೂ ಅಗತ್ಯದ ಔಷಧಿ ಕೊಡದೆ ಇರುವುದು